ಆ) ಚಿಂಚೋಳಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಸ್ವಂತ ಕಟ್ಟಡ ಕಾಮಗಾರಿ ನಿರ್ಮಾಣಕ್ಕೆ ನಬಾರ್ಡ್ ಆರ್.ಐ.ಡಿ.ಎಫ್.–19 ರಡಿಯಲ್ಲಿ ₹ 160.22 ಲಕ್ಷಗಳ ಮಂಜೂರಾತಿ ದೊರೆತಿದ್ದು, ಈ ಕುರಿತು ಸರ್ಕಾರದ ಆಡಳಿತಾತ್ಮಕ ನೀಡಲು ಪರಿಶೀಲಿಸಲಾಗುತ್ತಿದ್ದು, ಕಟ್ಟಡ ನಿರ್ಮಾಣ ಮಾಡಲು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.

ನಾಡಕಛೇರಿ ಕಟ್ಟಡ ನಿರ್ಮಾಣ ಮಾಡುವುದು

921 (830); ಶ್ರೀ ಡಾ॥ ಉಮೇಶ್ ಜಿ. ಜಾಧವ್ (ಚಿಂಚೋಳಿ)

ಅ) ಚಿಂಚೋಳಿ ತಾಲ್ಲೂಕಿನ ಕೋಡ್ಲಿ ಹೋಬಳಿಯಲ್ಲಿ ಕಂದಾಯ ಇಲಾಖೆಯ ನಾಡಕಛೇರಿ (ಉಪತಹಶೀಲ್ದಾರ) ಕಾರ್ಯಾಲಯ ಊರುಳುವ ಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು? (ವಿವರ ನೀಡುವುದು)

ಶ್ರೀ ವಿ. ಶ್ರೀನಿವಾಸ್ ಪ್ರಸಾದ್ (ಕಂದಾಯ ಸಚಿವರು)

ಅ) ಬಂದಿದೆ.

ಆ) ಪ್ರಸ್ತಾವನೆ ಜಿಲ್ಲಾಧಿಕಾರಿಗಳಿಂದ ಸ್ವೀಕೃತವಾದ ಕೂಡಲೇ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು

ಮುಳುಗಡೆ ಸಂತ್ರಸ್ಥರಿಗೆ ಪುನರ್ ವಸತಿ ಕಲ್ಪಿಸುವುದು

922 (831); ಶ್ರೀ ಡಾ॥ ಉಮೇಶ್ ಜಿ. ಜಾಧವ್ (ಚಿಂಚೋಳಿ)

ಅ) ಚಿಂಚೋಳಿ ತಾಲ್ಲೂಕಿನ ಕೆಳದಂಡೆ ಮುಲ್ಲಾಮಾರಿ ಯೋಜನೆಯ ಜಲಾಶಯದಲ್ಲಿ ಮುಳಗಡೆಯಾದ ಗಡಿಲಿಂಗದಳ್ಳಿ, ಯಲ್ಮಾಡಿ, ಚನ್ನೂರು ಗ್ರಾಮಸ್ಥರಿಗೆ ಸಮರ್ಪಕ ಪುನರ್ ವಸತಿ ಕಲ್ಪಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;